ವಿ-72-(24)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಲು ವಿಧಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆದು ಕೂಡಲೇ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಈಗಾಗಲೇ ಭರ್ತಿ ಮಾಡಲಾದ ಹುದ್ದೆಗಳನ್ನು ಸರ್ಕಾರ ಅನುಮೋದನೆ ಮಾಡಿ ವೇತನ ಬಿಡುಗಡೆ ಮಾಡುವ ಕುರಿತು.

**ಸರ್ಕಾರದ ಹೇಳಿಕೆ**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014 ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿತ್ತು.

ಆದರೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020 ದಿನಾಂಕ:10.06.2020 & ಆಇ/3/ ಬಿಇಎಂ/2020 ದಿ:06.07.2020 ರನ್ವಯ ಸರ್ಕಾರದ ಪತ್ರ ಸಂಖ್ಯೆ:ಇಡಿ/105/ಯುಪಿಸಿ/2020, ದಿ;29.07.2020 ಮತ್ತು ಇಡಿ/98/ಯುಪಿಸಿ/2020, ದಿನಾಂಕ:13.08.2020 ರಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ.

ಆರ್ಥಿಕ ಇಲಾಖೆಯ ಮಿತವ್ಯಯ ಆದೇಶವನ್ನು ತೆರವುಗೊಳಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಮಿತವ್ಯಯ ಆದೇಶ ತೆರವುಗೊಳಿದ ತಕ್ಷಣ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು.

ಇಡಿ 163 ಯುಪಿಸಿ 2020

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)